## ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್..ವಿ.ಪದ್ಮನಾಭ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಸ್ಥಳ ನಿಯುಕ್ತಿ ಬಗ್ಗೆ.

**ಓದಲಾಗಿದೆ:-**

1. ಅಧಿಸೂಚನೆ ಸಂಖ್ಯೆ:ಗ್ರಾಅಪ 119 ಸೇಶಿಕಾ 2012, ದಿನಾಂಕ: 25-05-2012.
2. ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ:2667/2012 ದಿನಾಂಕ: 04-06-2012 ರಂದು ನೀಡಿರುವ ಮಧ್ಯಂತರ ಆದೇಶ.
3. ಅಧಿಸೂಚನೆ ಸಂಖ್ಯೆ. ಗ್ರಾಅಪ 225 ಪಬವ 2012, ದಿನಾಂಕ. 15-06-2012.

*****

**ಪ್ರಸ್ತಾವನೆ:**

ಶ್ರೀ ಎಸ್.ವಿ.ಪದ್ಮನಾಭ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಳವಳ್ಳಿ ಇಲ್ಲಿ ಶ್ರೀ ಚಂದ್ರಹಾಸ ಇವರ ಸ್ಥಾನಕ್ಕೆ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 25-05-2012ರ ಅಧಿಸೂಚನೆಯಲ್ಲಿ ವರ್ಗಾಯಿಸಲಾಗಿತ್ತು. ಈ ಆದೇಶದ ವಿರುದ್ಧ ಶ್ರೀ ಚಂದ್ರಹಾಸ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 2667/2012 ಅನ್ನು ಸಲ್ಲಿಸಿದ್ದರು.

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ:2667/2012 ಅನ್ನು ಪರಿಶೀಲಿಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 04-06-2012ರ ಮಧ್ಯಂತರ ಆದೇಶದಲ್ಲಿ ಈ ಕೆಳಕಂಡಂತೆ ನಿರ್ದೇಶಿಸಿರುತ್ತದೆ:-

> *". . . . We direct that the applicant shall not be relieved of his duties at PRE Sub-division, Malavalli for a period of three months or until a Specific posting is given to him, whichever is earlier*
>
> *During the period of stay, the applicant shall be continued in Malavalli and if the Respondent No.2 has taken charge he shall and over charge to the applicant and await till a specific posting is given to the applicant".*

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಶ್ರೀ ಚಂದ್ರಹಾಸ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ. ಕೋಶ, ಜಿಲ್ಲಾ ಪಂಚಾಯತ್ ಮಂಡ್ಯ ಇಲ್ಲಿ ಖಾಲಿ ಇರುವ ಹುದ್ದೆಗೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ. 15-06-2012ರ ಅಧಿಸೂಚನೆಯಲ್ಲಿ ಸ್ಥಳನಿಯುಕ್ತಿಗೊಳಿಸಿರುತ್ತದೆ.

ಆದ್ದರಿಂದ, ಶ್ರೀ ಎಸ್.ವಿ.ಪದ್ಮನಾಭ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಳವಳ್ಳಿ ಇಲ್ಲಿನ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲು ನಿರ್ಧರಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಗ್ರಾಅಪ 240 ಜಿಪಅ 2012, ಬೆಂಗಳೂರು, ದಿನಾಂಕ.23-6-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಎಸ್.ವಿ.ಪದ್ಮನಾಭ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಳವಳ್ಳಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
23/6/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.
8. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಇಂದಿರಾನಗರ, ಬೆಂಗಳೂರು, ಇವರಿಗೆ-ಅರ್ಜಿ ಸಂಖ್ಯೆ:2667/2012,ರ ಪ್ರಕರಣಕ್ಕೆ ಸಂಬಂಧಿಸಿದಂತೆ.
9. ಸಂಬಂಧಪಟ್ಟ ಅಧಿಕಾರಿಗಳಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
11. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು-ಬಿ).
12. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
15. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.
16. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.